# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹೊನ್ನಾಳಿ

## ಸಿ.ಸಿ.443/2019

ಸಾಕ್ಷಿದಾರರ ಹೇಳಿಕೆಃ

**ಹೆಸರು** : ಯೋಗೇಶ ಟಿ ಚಾಸಾಃ **4** ಪ್ರಾಸಾಃ **1**

**ತಂದೆಯ ಹೆಸರು** : ಸಿದ್ದಪ್ಪ

**ವಯಸ್ಸು** : 45 ವರ್ಷ

**ವೃತ್ತಿ** : ವ್ಯವಸಾಯ

**ವಾಸಸ್ಥಳ** : ಯಕ್ಕನಹಳ್ಳಿ ಗ್ರಾಮ

ದಿನಾಂಕಃ **23-01-2026** ರಂದು ಸಾಕ್ಷಿಯನ್ನು ಕರೆದು ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ :-ಮಾನ್ಯ ಸ.ಸ.ಅ. ರವರಿಂದ:-

ಆರೋಪಿತರು ಗೊತ್ತು. ಚಾಸಾ-5 ಮತ್ತು 6 ಗೊತ್ತಿಲ್ಲ. ಈಗೇ ಸುಮಾರು 6 ವರ್ಷಗಳ ಹಿಂದೆ ಪೊಲೀಸರ ಕೋರಿಕೆಯ ಮೇರೆಗೆ 1 ದಾಖಲೆಗೆ ಸಹಿಯನ್ನು ಮಾಡಿರುತ್ತೇನೆ. ಅದರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ಈ ಪ್ರಕರಣದ ಬಗ್ಗೆ ಪೊಲೀಸರಿಗೆ ನಾನು ಯಾವುದೇ ಹೇಳಿಕೆ ಮತ್ತು ಮರು ಹೇಳಿಕೆಯನ್ನು ಕೊಟ್ಟಿರುವುದಿಲ್ಲ.

ಪೊಲೀಸರಿಗೆ ಬರೆದುಕೊಟ್ಟ ಮುಚ್ಚಳಿಕೆ ಪತ್ರವನ್ನು ನಿಪಿ-1 ಎಂದು, ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದಾರೆ. ಸೂಕ್ತ ಕಾರಣ ನೀಡಿದ ಮೇರೆಗೆ ಅನುಮತಿ ನೀಡಲಾಗಿದೆ.

ಪಾಟೀ ಸವಾಲುಃ ಸ.ಸ.ಅ. ರವರಿಂದಃ

ದಿಃ 01-04-2018 ರಂದು ಸಂಜೆ 05-30 ಗಂಟೆ ಸಮಯದಲ್ಲಿ 1 ನೇ ಆರೋಪಿಯು ತನ್ನ ಮನೆಯ ಮುಂಭಾಗದಲ್ಲಿ ಒಂದು ಪ್ಲಾಸ್ಟೀಕ್ ಚೀಲದಲ್ಲಿದ್ದ 180 ಎಂ ಎಲ್ ನ 45 ಬ್ಯಾಕ್ ಪೈಪರ್ ವಿಸ್ಕಿ ಪೌಚ್ ಗಳನ್ನು ಮತ್ತು 90 ಎಂ ಎಲ್ ನ 145 ಹೈವರ್ಸ್ಡ್ ವಿಸ್ಕಿ ಪೌಚ್ ಗಳನ್ನು ಮತ್ತು ಆರೋಪಿಯ ಜೇಬಿನಲ್ಲಿದ್ದ ರೂ.300/- ನಗದು ಹಣವನ್ನು ಪೊಲೀಸರು ಪಂಚರ ಸಮಕ್ಷಮ ಅಮಾನತ್ತು ಪಡಿಸಿಕೊಂಡು ಸಂಜೆ 06-30 ಗಂಟೆ ಸಮಯದವರೆಗೆ ಮಹಜರ್ ಕ್ರಮವನ್ನು ಜರುಗಿಸಿರುತ್ತಾರೆ ಎಂದು ನಂತರ ಆರೋಪಿ ಮತ್ತು ಮಾಲುಗಳೊಂದಿಗೆ ಠಾಣೆಗೆ ಹೋಗಿದ್ದು ಆ ಸಮಯದಲ್ಲಿ 2 ನೇ ಆರೋಪಿಯು ಎಲ್ಲಿಯೋ ಖರೀದಿ ಮಾಡಿಕೊಂಡು ಬಂದು ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವ ಬಗ್ಗೆ ತಿಳಿಸಿದರು ಎಂದು ಮತ್ತು ಆರೋಪಿತರನ್ನು ಮತ್ತು ಮಾಲುಗಳನ್ನು ಪುನಃ ನೋಡಿದರೆ ಗುರುತಿಸುತ್ತೇನೆ ಎಂದು ಪೊಲೀಸರಿಗೆ ನಿಪಿ-2 ರಂತೆ ಹೇಳಿಕೆಯನ್ನು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ.

ದಿಃ 17-08-2018 ರಂದು ಮಧ್ಯಾಹ್ನ 01-00 ಗಂಟೆ ಸಮಯದಲ್ಲಿ 2 ನೇ ಆರೋಪಿಯು ನಿರೀಕ್ಷಣಾ ಜಾಮೀನು ಪಡೆದುಕೊಂಡು ಬಂದು ಠಾಣೆಗೆ ಹಾಜರಾದ ಸಮಯದಲ್ಲಿ ಪೊಲೀಸರು ನನ್ನನ್ನು ಮತ್ತು ಚಾಸಾ-5 ಮತ್ತು 6 ರವರನ್ನು ಕರೆಸಿದ್ದು ಅದೇ ದಿನ 2-00 ಗಂಟೆ ಸಮಯದಲ್ಲಿ ನಾವು ಠಾಣೆಗೆ ಬಂದಾಗ 2 ನೇ ಆರೋಪಿಯು ಪೊಲೀಸರಿಗೆ ವಿಚಾರಣೆಯಲ್ಲಿ ಕುಡಿತಕ್ಕೆಂದು ಹೇಳಿ ಕುಂದೂರು, ಕೂಲಂಬಿ, ಮಲೇಕುಂಬಳೂರು ಗ್ರಾಮಗಳಲ್ಲಿ ವಿಸ್ಕಿ ಬಾಟಲಿಗಳನ್ನು ಖರೀದಿಸಿ ತೆಗೆದುಕೊಂಡು ಬಂದಿರುವುದು ಎಂದು ಮತ್ತು ತನ್ನ ಅಂಗಡಿಯ ಮುಂಭಾಗದಲ್ಲಿ 1 ನೇ ಆರೋಪಿಯೊಂದಿಗೆ ಅಧಿಕ ಬೆಲೆಗೆ ಮಾರಾಟ ಮಾಡುತ್ತಿರುವುದು ಎಂದು ಮತ್ತು ದಿಃ 01-04-2018 ರಂದು 2 ನೇ ಆರೋಪಿಯು ತನ್ನ ಕೆಲಸದ ನಿಮಿತ್ತ ಹೊರಗಡೆ ಹೋಗಿದ್ದಾಗ ಪೊಲೀಸರು ವಿಸ್ಕಿ ಬಾಟಲಿಗಳನ್ನು ಮಾರಾಟ ಮಾಡುತ್ತಿದ್ದ 1 ನೇ ಆರೋಪಿಯನ್ನು ಪೊಲೀಸರು ಕರೆದುಕೊಂಡು ಹೋಗಿದ್ದಾರೆ ಎಂದು ಮತ್ತು 2 ನೇ ಆರೋಪಿಯು ತಾನು ಕುಡಿತದ ಚಟಕ್ಕೆ ಹೇಳಿ ವಿಸ್ಕಿ ಬಾಟಲಿಗಳನ್ನು ಖರೀದಿಸಿಕೊಂಡು ಬಂದು 1 ನೇ ಆರೋಪಿಯೊಂದಿಗೆ ಮಾರಾಟ ಮಾಡಿರುತ್ತಾರೆ ಎಂದು ತಿಳಿಸಿದರು ಎಂದು ಮತ್ತು ಆರೋಪಿತರನ್ನು ಪುನಃ ನೋಡಿದರೆ ಗುರುತಿಸುತ್ತೇನೆ ಎಂದು ಪೊಲೀಸರಿಗೆ ನಿಪಿ-3 ರಂತೆ ಮರುಹೇಳಿಕೆಯನ್ನು ಕೊಟ್ಟಿರುತ್ತೇನೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರ

ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

ಮರುವಿಚಾರಣೆ ಇಲ್ಲ.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.